13

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರ ನಿಯಮ-330 ರ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ**

ಸರ್ಕಾರಿ / ಅನುದಾನಿತ ಪ್ರೌಢಶಾಲೆಯ ಸಹ ಶಿಕ್ಷಕರಾಗಿ ದಿನಾಂಕ:01/08/2008ರ ನಂತರ ನೇರ ನೇಮಕಾತಿ ಮೂಲಕ ಆಯ್ಕೆಯಾಗಿ, ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ರೂ.400/- ವಿಶೇಷ ಭತ್ಯೆಯನ್ನು ಮಂಜೂರು ಮಾಡಿ, 6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ದಿನಾಂಕ: 01/04/2018 ರಿಂದ ಒಂದು ವಿಶೇಷ ವಾರ್ಷಿಕ ಬಡ್ತಿಯನ್ನು ನೀಡುವಂತೆ ನ್ಯಾಯಾಲಯದ ನಿರ್ದೇಶನವಿದ್ದರೂ ಮಂಜೂರು ಮಾಡದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಪ್ರಾಥಮಿಕ, ಪ್ರೌಢಶಿಕ್ಷಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ**

ಸರ್ಕಾರಿ / ಅನುದಾನಿತ ಪ್ರೌಢ ಶಾಲೆಯ ಸಹ ಶಿಕ್ಷಕರಾಗಿ ದಿನಾಂಕ: 01.08.2008ರ ನಂತರ ನೇಮಕಗೊಂಡ ಸರ್ಕಾರಿ / ಅನುದಾನಿತ ಪ್ರಾಥಮಿಕ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ದಿನಾಂಕ: 09/05/2012ರ ಆದೇಶ ಮತ್ತು ದಿನಾಂಕ:27/10/2016ರ ಆದೇಶಗಳ ಪ್ರಕಾರ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲವೆಂದು ಆದೇಶಿಸಲಾಗಿರುತ್ತದೆ.

ಮುಂದುವರೆದು, ವಿಶೇಷ ವೇತನ ಭತ್ಯೆ ಮಂಜೂರಾತಿಗೆ ಸಂಬಂಧಿಸಿದಂತೆ, ಶ್ರೀ ಲಕ್ಷ್ಮೀನಾರಾಯಣ ಭಟ್ ಮತ್ತಿತರರು ಮಾನ್ಯ ಕರ್ನಾಟಕ ಆಡಳಿತ ನ್ಯಾಯಾಮಂಡಳಿಯಲ್ಲಿ ದಾಖಲಿಸಿರುವ ಅರ್ಜಿ ಸಂಖ್ಯೆ:4412- 4428-4430- 4444, 4446 4464, 4467-5224/2020 ರ ಪ್ರಕರಣದಲ್ಲಿ ಮಾನ್ಯ ನ್ಯಾಯಮಂಡಳಿಯು ದಿನಾಂಕ:05.05.2021 ರಂದು ನೀಡಿರುವ ಆದೇಶದಲ್ಲಿ ದಿನಾಂಕ:01.08.2008 ರ ನಂತರ ನೇಮಕಾತಿ ಹೊಂದಿರುವ ಸರ್ಕಾರಿ ಪ್ರೌಢಶಾಲಾ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡುವ ಕುರಿತು ಆದೇಶ ನೀಡಿರುತ್ತದೆ.

ಸದರಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿ ದಿನಾಂಕ:05.05.2021 ರ ನೀಡಿರುವ ತೀರ್ಪಿನ ವಿರುದ್ಧ ರಾಜ್ಯ ಸರ್ಕಾರವು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:6902/2022 ನ್ನು ದಾಖಲಿಸಲಾಗಿದ್ದು, ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಛ ನ್ಯಾಯಾಲಯವು ನೀಡುವ ಆದೇಶದಂತೆ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.

**ಇಪಿ 111 ಎಸ್‌ಎಲ್‌ಬಿ 2023**

**(ಎಸ್. ಮಧು ಬಂಗಾರಪ್ಪ)**
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ**
**ಸಚಿವರು.**